ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಅರಣ್ಯ ಪ್ರದೇಶಗಳಲ್ಲಿ ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

515(736) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಾದೇಶಿಕ ಮತ್ತು ಸಾಮಾಜಿಕ ಅರಣ್ಯದ ವಿಸ್ತೀರ್ಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಎಷ್ಟು ಅರಣ್ಯ ಪ್ರದೇಶಗಳಲ್ಲಿ ಪ್ರವಾಸಿಗರಿಗೆ ಹಾಗೂ ಸ್ಥಳೀಯರಿಗೆ ಪ್ರವಾಸಿ ತಾಣಗಳನ್ನು ನಿರ್ಮಿಸಲಾಗಿದೆ ; ಆ ಪ್ರವಾಸಿ ತಾಣಗಳಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ಹಾಲತಿ ಬೆಟ್ಟ ಮತ್ತು ಪಡುವಲಪಟ್ಟಣ ವ್ಯಾಪ್ತಿಯ ಬಸವನಕಲ್ಲು ಬೆಟ್ಟ ಪ್ರದೇಶದಲ್ಲಿ ಪ್ರವಾಸಿ ತಾಣವಾಗಿ ಅಭಿವೃದ್ಧಿ ಪಡಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಈ ಯೋಜನೆಗೆ ಅನುದಾನ ಮೀಸಲಿರಿಸಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು) ಇಲ್ಲದಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಕಾರ್ಯರೂಪಕ್ಕೆ ತರಲಾಗುವುದು ? (ವಿವರ ನೀಡುವುದು)